	ವರ್ಷ	ರೂ. ಲಕ್ಷಗಳಲ್ಲಿ
1.	1991-92	1.020
2.	1992-93	4.430
3.	1993-94	5.710
4.	1994-95	7.347

ಉತ್ತರ ಪತ್ರಿಕೆಗಳ ಮೌಲ್ಯ ಮಾಪನದ ಬಗ್ಗೆ

599 - ಶ್ರೀ ಜೆ.ಟಿ. ಪಾಟೀಲ್ (ಬೀಳಗಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪದವಿ ಪೂರ್ವ ಶಿಕ್ಷಣ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನಕ್ಕಾಗಿ ಉಪಮುಖ್ಯ ಪರಿವೀಕ್ಷಕರ ಮತ್ತು ಸಹಾಯಕ ಪರಿವೀಕ್ಷಕರ ನೇಮಕಾತಿ ಆದೇಶಗಳನ್ನು ಒಂದು ವಾರ ಮುಂಚಿತರಾಗಿ ಮಾತ್ರ ಕಳುಹಿಸುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹೆಚ್ಚಿನ ಸಂಖ್ಯೆಯಲ್ಲಿ ಪರೀಕ್ಷಕರು ಬಾರದಿದ್ದಲ್ಲಿ ಕ್ಯಾಂಪಿನ ಅವಧಿಯನ್ನು ವಿಸ್ತರಿಸದೇ ಮೌಲ್ಯ ಮಾಪನ ಕಾರ್ಯವನ್ನು ಪೂರ್ತಿಗೊಳಿಸಲು ಸರ್ಕಾರದವರು ಯಾವ ಕ್ರಮಗಳನ್ನು ಕೈಗೊಂಡಿದ್ದಾರೆ.

ಇ) ಶಿಕ್ಷಕ ವರ್ಗದ ಒಂದು ಗುಂಪಿನವರು ಸತ್ಯಾಗ್ರಹದಲ್ಲಿ ನಿರತರಾದರೆ ಮೌಲ್ಯಮಾಪನ ಕಾರ್ಯದಲ್ಲಾಗುವ ವಿಳಂಬವನ್ನು ತಪ್ಪಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಈ) ಪದವಿ ಮಹಾವಿದ್ಯಾಲಯಗಳ ಶಿಕ್ಷಕರ 20 ಬೇಡಿಕೆಗಳು ಇನ್ನೂ ಇತ್ಯರ್ಥಗೊಳ್ಳದೆ ಬಾಕಿ ಇರುವ ಹಿನ್ನೆಲೆಯಲ್ಲಿ ಮೌಲ್ಯಮಾಪನ ಕಾರ್ಯ ಸುಗಮವಾಗಿ ಸಾಗುವುದೆಂಬ ಭರವಸೆ ಸರ್ಕಾರಕ್ಕಿದೆಯೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಸಾಮಾನ್ಯವಾಗಿ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯ ಪ್ರಾರಂಭವಾಗುವ 20 ದಿವಸಗಳ ಮುಂಚಿತವಾಗಿ ನೇಮಕಾತಿ ಆದೇಶಗಳನ್ನು ಕಳುಹಿಸಲಾಗುವುದು.

ಆ) ನಿಗದಿಪಡಿಸಿದ ಸಂಖ್ಯೆಯ ಮೌಲ್ಯಮಾಪಕರು ಬಾರದಿದ್ದಲ್ಲಿ ಕೆಲವು ಸಂದರ್ಭಗಳಲ್ಲಿ ಹೆಚ್ಚುವರಿ ಮೌಲ್ಯಮಾಪಕರನ್ನು ನೇಮಿಸಲಾಗುವುದು. ಕೆಲವು ಸಂದರ್ಭಗಳಲ್ಲಿ ಕ್ಯಾಂಪಿನ ಅವಧಿಯನ್ನು ವಿಸ್ತರಿಸಲಾಗುವುದು.

ಇ) ಒಂದು ಗುಂಪಿನ ಮೌಲ್ಯಮಾಪನ ಬೇಡಿಕೆಗಳು ಸಮಂಜಸವಾಗಿದ್ದಲ್ಲಿ ಬೇಡಿಕೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮಕೈಗೊಂಡು ಮೌಲ್ಯಮಾಪನ ಕಾರ್ಯವನ್ನು ಮುಗಿಸಲಾಗುತ್ತಿದೆ. ಇಲ್ಲದಿದ್ದ ಪಕ್ಷದಲ್ಲಿ ಪ್ರಶ್ನೆ 'ಅ' ಗೆ ನೀಡಿರುವ ಉತ್ತರದಲ್ಲಿ ತಿಳಿಸಿರುವಂತೆ ಅದೇ ವಿಷಯದ ಅರ್ಹ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ಮೌಲ್ಯಮಾಪನ ಕಾರ್ಯವನ್ನು ಮುಗಿಸಲಾಗುವುದು.

ಈ) ಭರವಸೆ ಇದೆ.

ಪ್ರಾಥಮಿಕ ಶಾಲಾ ಗೌರವ ಶಿಕ್ಷಕರಾಗಿ ಸೇವೆಸಲ್ಲಿಸುತ್ತಿರುವವರ ಬಗ್ಗೆ

967 - ಶ್ರೀ ಜೆ.ಟಿ. ಪಟೀಲ್ (ಬೀಳಗಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?